# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## **ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 15-03-2021 ಪ್ರಶ್ನೆ ಸಂಖ್ಯೆ : 1056(1165)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀಮತಿ ಎಸ್. ವೀಣಾ ಅಚ್ಚಯ್ಯ(ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 15-03-2021

ಉತ್ತರಿಸುವ ಸಚಿವರು: ಮಾನ್ಯ ಅರಣ್ಯ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

ವಿಷಯ : ಕೊಡಗು ಜಿಲ್ಲೆಯಲ್ಲಿ ಕಾಡಾನೆ ಹಾವಳಿ ತಡೆಯಲು ನಿರ್ಮಿಸುತ್ತಿರುವ ತಡೆಬೇಲಿ ಕುರಿತು

(ಅ) ಕೊಡಗು ಜಿಲ್ಲೆಯಲ್ಲಿ ಕಾಡಾನೆಗಳ ಉಪಟಳ ತಪ್ಪಿಸುವ ಸಲುವಾಗಿ ಕಾಡಾನೆ ಹಾವಳಿ ಹೆಚ್ಚು ಇರುವ ಪ್ರದೇಶವಾದ ವಾಲ್ನಾರು - ತ್ಯಾಗತ್ತೂರು-ದೇವರಪುರ-ತಿತಿಮತಿ ಭಾಗದಲ್ಲಿ ರೈಲು ಕಂಬಿಗಳಿಂದ ತಡೆಬೇಲಿ ನಿರ್ಮಿಸುವ ಕಾರ್ಯ ವಿಳಂಬವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಸದರಿ ಯೋಜನೆಯ ವ್ಯಾಪ್ತಿ ಎಷ್ಟು ಕಿಲೋ ಮೀಟರ್ ದೂರವನ್ನು ಹೊಂದಿರುತ್ತದೆ ಹಾಗೂ ಇದುವರೆಗೆ ಎಷ್ಟು ದೂರದ ಕಾಮಗಾರಿಯನ್ನು ಪೂರ್ಣಗೊಳಿಸಲಾಗಿದೆ;

(ಇ) ಬಾಕಿ ಉಳಿದಿರುವ ಕಾಮಗಾರಿಯನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು?